ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 18/3/2012

ಸಂ.ಕ 18/3/12

# ಡೆಪ್ಯೂಟಿ ಸ್ಪೀಕರ್ ರಾಜೀನಾಮೆ



ವಿಧಾನಸಭೆ: ವಿಧಾನಸಭೆಯ ಉಪಾಧ್ಯಕ್ಷ ಕೃಷ್ಣಾರೆಡ್ಡಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಜೆಡಿಎಸ್‌ನ ಕೃಷ್ಣಾರೆಡ್ಡಿ ಅವರನ್ನು ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿತ್ತು. ಬಿಜೆಪಿ ಅಧಿಕಾರಕ್ಕೆ ಬಂದ ಮೇಲೆಯೂ ಕೃಷ್ಣಾರೆಡ್ಡಿ ತಮ್ಮ ಸ್ಥಾನದಲ್ಲಿ ಮುಂದುವರೆದಿದ್ದರು. ಬಿಜೆಪಿ ಸದಸ್ಯರು ಅವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಮಾಡಲು ನಿರ್ಧರಿಸಿದ್ದರು. ಈ ವಿಚಾರ ತಿಳಿದ ಕೃಷ್ಣಾರೆಡ್ಡಿ ಮುಜುಗರಕ್ಕೆ ಒಳಗಾಗದಿರಲು ನಿರ್ಧರಿಸಿ ತಮ್ಮ ರಾಜೀನಾಮೆ ಸಲ್ಲಿಸಿದ್ದಾರೆ. ಅವರು ರಾಜೀನಾಮೆ ನೀಡಿರುವುದರಿಂದ ಅವರ ವಿರುದ್ಧ ಅವಿಶ್ವಾಸ ನಿರ್ಣಯವನ್ನು ಕೈಬಿಡಲಾಗಿದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಸದನದಲ್ಲಿ ಪ್ರಕಟಿಸಿದರು.